Akashvani : Bangalore
Regional Bulletin In Kannada
09.03.2026 / 18.40  hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಗರ್ ಹುಕುಂ ಯೋಜನೆಯಡಿ ಅರ್ಹ ರೈತರಿಗೆ ಜಮೀನು ಮಂಜೂರು; ಸರ್ಕಾರದ ಉದ್ದೇಶದಲ್ಲಿ ಬದಲಾವಣೆ ಇಲ್ಲ- ಕಂದಾಯ ಸಚಿವ ಕೃಷ್ಣಬೈರೇಗೌಡ ಸ್ಪಷ್ಟನೆ
- ಇತಿಹಾಸ ಪ್ರಸಿದ್ಧ ಮೈಸೂರು ಸಿಲ್ಕ್ ಕಾರ್ಖಾನೆ ಮುಚ್ಚುವುದಿಲ್ಲ; ವಿಧಾನಸಭೆಯಲ್ಲಿ ಸರ್ಕಾರದ ಭರವಸೆ
- ಸರ್ಕಾರಿ ಸಂಸ್ಥೆಗಳಿಗೆ ಅಗತ್ಯವಿರುವ ೮೯೦ ವಿವಿಧ ಔಷಧಗಳನ್ನು ೮೮೦ ಕೋಟಿ ರೂಪಾಯಿ ವೆಚ್ಚದಲ್ಲಿ ಖರೀದಿಸಲು ಅನುಮೋದನೆ- ಸಚಿವ ದಿನೇಶ್ ಗುಂಡೂರಾವ್
- ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಒಂದು ಸಾವಿರ ಬೋಧಕ ಹುದ್ದೆ ಭರ್ತಿಗೆ ನಿರ್ಧಾರ- ಸಚಿವ ಡಾ.ಎಂ.ಸಿ.ಸುಧಾಕರ್
- ರಾಜ್ಯದಲ್ಲಿ ಒಂದು ಸಾವಿರ ಕೆಪಿಎಸ್ ಶಾಲೆಗಳ ಪ್ರಾರಂಭ; ೧೫ ಸಾವಿರ ಶಿಕ್ಷಕರ ಭರ್ತಿಗೆ ಕ್ರಮ - ಸಚಿವ ಮಧು ಬಂಗಾರಪ್ಪ

*****************

ಅಕ್ರಮ-ಸಕ್ರಮ ಬಗರ್ ಹುಕುಂ ಯೋಜನೆಯಡಿ ಅರ್ಹ ರೈತರಿಗೆ ಜಮೀನು ಮಂಜೂರು ಮಾಡಬೇಕೆನ್ನುವ ಸರ್ಕಾರದ ಉದ್ದೇಶದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಸ್ಪಷ್ಟಪಡಿಸಿದ್ದಾರೆ.

ಅವರು, ವಿಧಾನಸಭೆಯಲ್ಲಿಂದು ಟಿ.ಬಿ.ಜಯಚಂದ್ರ ಅವರ ಪ್ರಶ್ನೆಗೆ ಉತ್ತರ ನೀಡಿ, ಈಚಲು ವನ ಪ್ರದೇಶವನ್ನು ಬಗರ್ ಹುಕುಂ ಯೋಜನೆಯಡಿಯಲ್ಲಿ ರೈತರಿಗೆ ಮಂಜೂರು ಮಾಡುವ ವಿಚಾರದಲ್ಲಿ ಕೆಲವು ಕಾನೂನು ತೊಡಕುಗಳಿವೆ ಎಂದರು.

ಬಗರ್ ಹುಕುಂ ಭೂಮಂಜೂರಾತಿ ಸಂದರ್ಭದಲ್ಲಿ ಪ್ರಸ್ತಾಪಿತ ಐದು ನಿಯಮಗಳನ್ನು ಯಥಾವತ್ ಪಾಲಿಸಿದರೆ, ಕೆಲಸ ನಿರ್ವಹಣೆ ಕಷ್ಟಾಸಾಧ್ಯ.  ಅರಣ್ಯ ಜಮೀನು ರಕ್ಷಣೆಗೆ ಸುಪ್ರೀಂಕೋರ್ಟ್‌ನಿಂದ ಕಟ್ಟುನಿಟ್ಟಿನ ಆದೇಶ ಇದೆ. ರೈತರಿಗೆ ಸಹಾಯ ಮಾಡಬೇಕು ಎನ್ನುವ ಉದ್ದೇಶದಿಂದ ವಲಯ

ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ನಿಯಮಗಳನ್ನು ಸರಳೀಕರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ವರ್ಷಾಂತ್ಯಾದ ವೇಳೆಗೆ ಮಾಜಿ ಸೈನಿಕರ ಕೋಟಾದಡಿ ನಿವೃತ್ತ ಸೈನಿಕರಿಗೆ, ಬಡಾವಣೆ ನಿರ್ಮಿಸಿ, ಸರ್ಕಾರಿ ನಿವೇಶನ ಮಂಜೂರು ಮಾಡಲಾಗುವುದು ಎಂದು ವಿಧಾನಸಭೆಯಲ್ಲಿ ಶಾಸಕ ಬಿ.ಪಿ.ಹರೀಶ್ ಅವರ ಪ್ರಶ್ನೆಗೆ ಸಚಿವ ಕೃಷ್ಣಬೈರೇಗೌಡ ಉತ್ತರ ನೀಡಿದರು.

****************

ಇತಿಹಾಸ ಪ್ರಸಿದ್ಧ ಮೈಸೂರು ಸಿಲ್ಕ್ ಕಾರ್ಖಾನೆಯನ್ನು ಮುಚ್ಚುವುದಿಲ್ಲ ಎಂದು ಸರ್ಕಾರ ವಿಧಾನಸಭೆಯಲ್ಲಿಂದು ಭರವಸೆ ನೀಡಿದೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಮೈಸೂರಿನ ಕೃಷ್ಣರಾಜ ವಿಧಾನಸಭಾ ಕ್ಷೇತ್ರ ಶಾಸಕ ಶ್ರೀವತ್ಸ.ಟಿ.ಎಸ್ ಅವರ ಪ್ರಶ್ನೆಗೆ ಉತ್ತರಿಸಿದ ಪಶುಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ಮೈಸೂರು ರೇಷ್ಮೆ ಕಾರ್ಖಾನೆಯನ್ನು ಮುಚ್ಚುವುದಿಲ್ಲ ಎಂದು ಹೇಳಿದರು.

ಪ್ರತಿಪಕ್ಷ ನಾಯಕ ಆರ್.ಅಶೋಕ ಮಧ್ಯಪ್ರವೇಶಿಸಿ ಮಾತನಾಡಿ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ ಲಾಭದಾಯಕವಾಗಿ ನಡೆಯುತ್ತಿರುವ ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ಯಮವಾಗಿದ್ದು ಖಾಸಗಿಯವರ ಪ್ರಭಾವಕ್ಕೆ ಮಣಿದು ಸರ್ಕಾರ ಈ ಕಾರ್ಖಾನೆಯನ್ನು ಮುಚ್ಚಲು ಪ್ರಯತ್ನಿಸುತ್ತಿದೆ ಮೈಸೂರಿನಲ್ಲಿ ಕಾರ್ಖಾನೆ ಸುತ್ತಮುತ್ತಲಿರುವ ಜಮೀನುಗಳು ಖಾಸಗಿಯವರ ಪಾಲಾಗಿದ್ದು ಅದನ್ನು ಕೂಡಲೆ ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮಧ್ಯಪ್ರವೇಶಿಸಿ ಮಾತನಾಡಿ ಕೆ ಎಸ್ ಐ ಸಿ ಸೀರೆಗಳಿಗೆ ದೇಶ ವಿದೇಶಗಳಲ್ಲಿ ಅಪಾರ ಬೇಡಿಕೆಯಿದೆ, ಬೇಡಿಕೆ ತಕ್ಕಂತೆ ಉತ್ಪಾದನೆ ಹೆಚ್ಚಿಸಬೇಕು ಅಲ್ಲಿ ಕೆಲಸ ಮಾಡುವ ಸಿಬ್ಬಂದಿಗಳ ವೇತನ ಹೆಚ್ಚಳ ಮಾಡಬೇಕು ಎಂದು ಒತ್ತಾಯಿಸಿದರು.

****************

ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆ ಹಾಗೂ ಇತರ ಸರ್ಕಾರಿ ಸಂಸ್ಥೆಗಳಿಗೆ ಅಗತ್ಯವಿರುವ ೮೯೦ ವಿಧಗಳ ಔ?ಧಿಗಳನ್ನು ಸುಮಾರು

೮೮೦ ಕೋಟಿ ರೂಪಾಯಿ ಮೊತ್ತದಲ್ಲಿ ಖರೀದಿಸಲು ಅನುಮೋದನೆ ನೀಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ವಿಧಾನಪರಿಷತ್‌ನಲ್ಲಿಂದು ಪ್ರಶೋತ್ತರ ವೇಳೆಯಲ್ಲಿ ಸದಸ್ಯ ಡಾ.ಧನಂಜಯ ಸರ್ಜಿ ಹಾಗೂ ಪ್ರತಾಪ ಸಿಂಹ ನಾಯಕ್ ಕೆ.ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಔ?ಧಗಳನ್ನು ಖರೀದಿಸಲು ಕೆಎಸ್‌ಎಂಎಸ್‌ಸಿಎಲ್ ಸಂಸ್ಥೆಗೆ ಅನುಮೋದನೆ ನೀಡಲಾಗಿದೆ. ಔ?ಧಿ ಖರೀದಿಯನ್ನು ಪಾರದರ್ಶಕವಾಗಿ ಟೆಂಡರ್ ಕರೆದು ಮಾಡಲಾಗುತ್ತಿದೆ. ಹೆಚ್ಚು ಬಿಡ್‌ದಾರರು ಭಾಗವಹಿಸಲು ಅವಕಾಶವಾಗುವಂತೆ ಟೆಂಡರ್ ?ರತ್ತುಗಳನ್ನು ವಿಧಿಸಲಾಗಿದೆ ಎಂದರು.

ಔ?ಧ ಸರಬರಾಜು ಮಾಡುವ ಮುನ್ನವೇ ಗುಣಮಟ್ಟದ ಪರೀಕ್ಷೆ ಮಾಡಲಾಗುವುದು. ಕೊರತೆ ಇರುವ ಔ?ಧಗಳನ್ನು ತಾತ್ಕಾಲಿಕವಾಗಿ ಖರೀದಿಸಲು ಕ್ರಮ ಕೈಗೊಳ್ಳಲಾಗಿದೆ. ವಾರ್ಷಿಕ ಔ?ಧಿ ಖರೀದಿ ಬದಲು ೩ ರಿಂದ ೪ ತಿಂಗಳಿಗೊಮ್ಮೆ ಅಗತ್ಯವಿರುವ ಔ?ಧಿ ಖರೀದಿ ಮಾಡಲಾಗುತ್ತಿದೆ. ಇದರಿಂದ ಅವಧಿ ಮುಗಿಯುವ ಔ?ಧಿಗಳ ಸಂಖ್ಯೆ ತಪ್ಪಲಿದೆ. ೨೩೨ ಕೋಟಿ ರೂ.ಗಳ? ಔ?ಧಿಗಳನ್ನು ಒದಗಿಸಲಾಗಿದೆ. ಈ ತಿಂಗಳು, ಮುಂದಿನ ತಿಂಗಳು ಸರಬರಾಜು ಆಗಲಿದೆ ಎಂದು ಸಚಿವ ದಿನೇಶ್ ಗುಂಡೂರಾವ ಮಾಹಿತಿ ನೀಡಿದರು.

*****************

ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ೧ ಸಾವಿರ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ತ್ವರಿತ ಕ್ರಮ ಕೈಗೊಳ್ಳಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ವಿಧಾನಪರಿಷತ್‌ನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಜೆಡಿಎಸ್ ಸದಸ್ಯ ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ೩ ಸಾವಿರ ಹುದ್ದೆಗಳ ಪೈಕಿ ೧ಸಾವಿರ ಭರ್ತಿ ಮಾಡಲು ಬಜೆಟ್ ನಲ್ಲಿ ಮಂಜೂರಾತಿ ದೊರೆತಿದೆ. ಆಯಾ ವಿಶ್ವವಿದ್ಯಾಲಯಗಳ ಕುಲಪತಿಗಳ ಜೊತೆ ಚರ್ಚಿಸಿ ಅಗತ್ಯವಿರುವ ಬೋಧಕ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಜಾಗತಿಕ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಕಾಲೇಜು ಶಿಕ್ಷಣ ವ್ಯಾಪ್ತಿಯ ಸರ್ಕಾರಿ ಕಾಲೇಜುಗಳ ಕಲಿಕಾ ವ್ಯವಸ್ಥೆಯಲ್ಲಿ ಹಲವು ಬದಲಾವಣೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಶಾಸಕ ರಮೇಶ್ ಬಾಬು ಅವರ ಇನ್ನೊಂದು ಪ್ರಶ್ನೆಗೆ ಉತ್ತರ ನೀಡಿದರು.

ಡಿಜಿಟಲ್ ಕಲಿಕೆ, ಖಾಸಗಿ ಸಂಸ್ಥೆಗಳೊಂದಿಗೆ ಒಡಂಬಡಿಕೆ, ಕಲಿಕೆ ಜೊತೆ ಕೌಶಲ್ಯ ಮೊದಲಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

*****************

ಶಿವಮೊಗ್ಗದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಮೈ ಭಾರತ್ ಶಿವಮೊಗ್ಗ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಮಹಿಳಾ ದಿನದ ಹಿನ್ನೆಲೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನ ಹಮ್ಮಿಕೊಳ್ಳಲಾಗಿತ್ತು.

ಕಳೆದ ಮೂರು ದಿನಗಳಿಂದ ನಡೆದ ಈ ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯರಾದ ಬಲ್ಕಿಶ್ ಭಾನು ಅವರು ಭಾಗಿಯಾಗಿದ್ದರು ಈ ವೇಳೆ ಶಿವಮೊಗ್ಗ ಕಾನೂನು ಪ್ರಾಧಿಕಾರ ಹಾಗೂ ಸಿವಿಲ್ ಹಿರಿಯ ನ್ಯಾಯಾಧೀಶರಾದ ಸಂತೋಷ್ ಎಂ ಎಸ್ ಕೂಡ ಭಾಗಿಯಾಗಿದ್ದರು.

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಿನ್ನೆಲೆಯಲ್ಲಿ ಮಹಿಳೆಯರಿಗಾಗಿ ಅಥ್ಲೆಟಿಕ್ ಥ್ರೋಬಾಲ್, ಹಗ್ಗ ಜಗ್ಗಾಟ, ಸ್ಲೋ ಬೈಕ್ ರೇಸ್, ಫ್ಯಾಷನ್ ಶೋ ಹಾಗೂ ಹಲವು ಬಗೆಯ ಕಾರ್ಯಕ್ರಮಗಳನ್ನ ಹಮ್ಮಿಕೊಳ್ಳಲಾಗಿತ್ತು, ಇದರಲ್ಲಿ ಭಾಗಿಯಾದ ಮಕ್ಕಳು ಹಾಗೂ ಮಹಿಳೆಯರು ಆಟವಾಡಿ ಪ್ರಶಸ್ತಿಗಳಿಗೆ ಭಾಜನರಾದರು. ಈ ಕಾರ್ಯಕ್ರಮವು ಕಳೆದ ಮೂರು ದಿನಗಳಿಂದ ನಡೆದು ಸಮಾರೋಪ ಸಮಾರಂಭ ವನ್ನು ಶಿವಮೊಗ್ಗದ ನೆಹರು ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲಾಗಿತ್ತು.

ಯುವಕರು ಹಾಗೂ ಮಹಿಳೆಯರಲ್ಲಿ ಕ್ರೀಡೆಯ ಬಗ್ಗೆ ಆಸಕ್ತಿಯನ್ನು ಹೆಚ್ಚಿಸಲು ಹಾಗೂ ದೇಹವನ್ನ ಸದೃಢವಾಗಿ ಇಟ್ಟುಕೊಳ್ಳುವ ದೃಷ್ಟಿಯಿಂದ ವಿವಿಧ ಕಾರ್ಯಕ್ರಮಗಳ ಹಮ್ಮಿಕೊಳ್ಳಲಾಗಿತ್ತು. ಖೇಲೋ ಇಂಡಿಯಾ ಹಾಗೂ ಫಿಟ್ ಇಂಡಿಯಾ ಈ ಕಾರ್ಯಕ್ರಮವನ್ನ ಪ್ರಯೋಜಿಸಿತ್ತು.

*****************

ಶಾಲಾ-ಕಾಲೇಜುಗಳಲ್ಲಿ ಖಾಲಿ ಇರುವ ೧೫ ಸಾವಿರ ಶಿಕ್ಷಕರ ಹುದ್ದೆಗಳ ನೇಮಕ ಪ್ರಕ್ರಿಯೆಗೆ ಕ್ರಮ ವಹಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿ ಪ್ರಶೋತ್ತರ ವೇಳೆಯಲ್ಲಿ ಸದಸ್ಯ ಎಚ್.ಎಸ್. ಗೋಪಿನಾಥ್ ಪ್ರಶ್ನೆಗೆ ಉತ್ತರಿಸಿದ ಅವರು, ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ಘೋಷಿ ಸಿರುವಂತೆ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು ಎಂದರು. ಶೈಕ್ಷಣಿಕ ಚಟು ವಟಿಕೆಗಳಿಗೆ ತೊಂದರೆ ಆಗದಂತೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.

ರಾಜ್ಯದ ಯಾವುದೇ ಸರ್ಕಾರಿ ಶಾಲೆಯನ್ನು ಸ್ವ ಇಚ್ಛೆಯಿಂದ ಸರ್ಕಾರ ಮುಚ್ಚುವುದಿಲ್ಲ, ಸರ್ಕಾರಿ ಶಾಲೆಗಳಿಗೆ ವಿದ್ಯಾರ್ಥಿಗಳು ಬರಬೇಕು. ಆದರೆ ವ?ದಿಂದ ವ?ಕ್ಕೆ ವಿದ್ಯಾರ್ಥಿಗಳ ಸಂಖ್ಯೆ ಇಳಿಮುಖವಾಗುತ್ತಿದೆ ಎಂದು ಶಾಸಕ ನಿರಾಣಿ ಹನುಮಂತ ರುದ್ರಪ್ಪ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಪೂರ್ವ ಪ್ರಾಥಮಿಕ ತರಗತಿಯಿಂದ ಪದವಿ ಪೂರ್ವ ಶಿಕ್ಷಣದವರೆಗೆ ಒಂದೇ ಸೂರಿನಡಿ ಶಿಕ್ಷಣ ನೀಡಲು ಸ್ಥಳಾವಕಾಶ ಮತ್ತು ಉತ್ತಮ ದಾಖಲಾತಿ ಹೊಂದಿರುವ ಆಯ್ದ ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ ಎಂದರು.

ಗ್ರಾಮಪಂಚಾಯಿತಿಗೊಂದು ಕೆಪಿಎಸ್ ಶಾಲೆ ಪ್ರಾರಂಭಿಸಬೇಕು ಎಂಬ ಉದ್ದೇಶವಿದೆ. ಇದನ್ನು ಹಂತಹಂತವಾಗಿ ಮಾಡಲಾಗುವುದು. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಕರಿದ್ದು, ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಲಾಗಿದೆ.

ಸರ್ಕಾರಿ ಶಾಲೆಗಳ ದಾಖಲಾತಿಗೆ ಶಾಸಕರು ಸಹ ಗಮನ ಹರಿಸಬೇಕು. ಶಾಲೆಗಳ ಆರಂಭಕ್ಕೂ ಮುನ್ನವೇ ಶಿಕ್ಷಕರ ವರ್ಗಾವಣೆ ಕೌನ್ಸೆಲಿಂಗ್ ಪೂರ್ಣಗೊಳಿಸಲಾಗುವುದು ಎಂದರು.

೨೦೨೪-೨೫ನೇ ಶೈಕ್ಷಣಿಕ ಸಾಲಿನಿಂದ ಎಲ್ ಕೆಜಿಯಿಂದ ೫ನೇ ತರಗತಿವರೆಗೆ ಕೆಪಿಎಸ್ ಶಾಲೆಗಳಲ್ಲಿ ಏಕ ತರಗತಿ ಪಠ್ಯ ಪುಸ್ತಕ ಆಧರಿತ ದ್ವಿಭಾ? ಬೋಧನೆಯನ್ನು ಅಳವಡಿಸಿಕೊಳ್ಳಲಾಗುತ್ತಿದೆ ಎಂದು ನುಡಿದರು.

ಕಳೆದ ಮೂರು ವ?ಗಳಲ್ಲಿ ೩೧ ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಪರಿವರ್ತಿಸಲಾಗಿದೆ ಎಂದು ಶಾಸಕರಾದ ಬಲ್ಕೀಸ್ ಬಾನು ಅವರ ಪ್ರಶ್ನೆಗೆ ಸಚಿವ ಮಧುಬಂಗಾರಪ್ಪ ಉತ್ತರಿಸಿದರು.

ಒಂದೇ ಆವರಣ ಅಥವಾ ಒಂದೇ ಭೌಗೋಳಿಕ ಪ್ರದೇಶದಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢ, ಪದವಿ ಪೂರ್ವ ವಿಭಾಗಗಳಿದ್ದು, ಕನಿ? ೫೦೦ ವಿದ್ಯಾರ್ಥಿಗಳ ದಾಖಲಾತಿ ಇರುವ ಶಾಲೆಗಳಿಗೆ ೫ ಎಕರೆವರೆಗೆ ಸ್ಥಳಾವಕಾಶ ಪರಿವರ್ತಿಸಲು ಪರಿಗಣಿಸಲಾಗುವುದು. ೧ ಸಾವಿರ ಕೆಪಿಎಸ್ ಶಾಲೆಗಳನ್ನು ಪ್ರಾರಂಭಿಸಲಾಗುವುದು ಎಂದು ಸಚಿವ ಮಧು ಬಂಗಾರಪ್ಪ ವಿವರ ನೀಡಿದರು.

*****************

ರಾಜ್ಯದಲ್ಲಿ ಖಾಲಿಯಿರುವ ೪೦೦ ಪಶುವೈದ್ಯಾಧಿಕಾರಿಗಳ ನೇರ ನೇಮಕಾತಿ ಮುಖಾಂತರ ಹಾಗೂ ಹೆಚ್ಚುವರಿಯಾಗಿ ೪೦೦ ಪಶುವೈದ್ಯಾಧಿಕಾರಿಗಳ ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ.

*********ಮುಕ್ತಾಯ********